ಅ) ಹುಬ್ಬಳ್ಳಿ–ಧಾರವಾಡ ಪಾಲಿಕೆ ವ್ಯಾಪ್ತಿಯಲ್ಲಿಯ ಜನರಿಗೆ ಹೊರೆ ಆಗುವಂತೆ ಕುಡಿಯುವ ನೀರಿನ ದರ 60 ರಿಂದ 90 ರೂಪಾಯಿಗೆ ಏರಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕುಡಿಯುವ ನೀರಿನ ಮಾಸಿಕ ದರ 60 ರಿಂದ 90 ರೂಪಾಯಿ ಏರಿಸಿದ್ದನ್ನು ಕೈಬಿಟ್ಟು ಪುನಃ 60 ರೂಪಾಯಿ ನಿಗದಿಪಡಿಸಿ ಸರ್ಕಾರ ಸುತ್ತೋಲೆ ಹೊರಡಿಸುವುದೇ;

ಇ) ಇದರಿಂದ ನಾಗರೀಕರಿಗೆ ಆಗುತ್ತಿರುವ ತೊಂದರೆಯನ್ನು ಹೋಗಲಾಡಿಸಲಿಕ್ಕೆ ಸರ್ಕಾರ ಕೈಗೊಂಡ ಕ್ರಮವೇನು;

ಈ) ಹಾಗಿಲ್ಲದ್ದಲ್ಲಿ, ಕಾರಣವೇನು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಯವರು) :

ಅ) ಬಂದಿದೆ.

ಆ) ಇಲ್ಲ.

ಇ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕುಡಿಯುವ ನೀರಿನ ವಿತರಣೆಯನ್ನು ಉತ್ತಮ ಪಡಿಸಲು ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಮಾಸಿಕ ದರವನ್ನು ಕೇವಲ ರೂ.30 ಗಳಷ್ಟು ಹೆಚ್ಚಿಸಿರುವುದರಿಂದ ನಾಗರೀಕರಿಗೆ ಅಂತಹ ಹೆಚ್ಚಿನ ಹೊರೆಯಾಗುವುದಿಲ್ಲ.

ಈ) ಉದ್ಭವಿಸುವುದಿಲ್ಲ.

389 (142) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ):– ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಸಮಗ್ರ ಅಭಿವೃದ್ಧಿಗಾಗಿ ಯು.ಜೆ.ಡಿ. ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದೆಯೇ;

2) ಇದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು;

3) ಹಾಗಿಲ್ಲದಿದ್ದಲ್ಲಿ ಕಾರಣಗಳೇನು;

4) ಯು.ಜಿ.ಡಿ. ಯೋಜನೆ ಕಾರ್ಯರೂಪಕ್ಕೆ ಸೇರಲು ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿರುವುದು ನಿಜವೇ?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯ ಮಂತ್ರಿಯವರು) :

1) ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಹಣಕಾಸು ಸಂಸ್ಥೆ (ಕೆ.ಯು.ಐ.ಡಿ.ಎಫ್.ಸಿ) ಬೆಂಗಳೂರು ವತಿಯಿಂದ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯಲ್ಲಿ ಒಳಚರಂಡಿ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಥಮ ಕಾರ್ಯಸಾಧ್ಯತಾ ವರದಿಯನ್ನು ತಯಾರಿಸಲಾಗಿರುತ್ತದೆ. ಈ ಯೋಜನೆಯನ್ನು ಎ.ಡಿ.ಬಿ. ಹಣಕಾಸು ನೆರವಿನ ಉತ್ತರ ಕರ್ನಾಟಕ ನಗರ ವಲಯ ಬಂಡವಾಳ ಹೂಡಿಕೆ ಯೋಜನೆಯಡಿಯಲ್ಲಿ (NKUSIP) ಕೈಗೊಳ್ಳಲು ಯೋಚಿಸಲಾಗಿದೆ. ಈ ಯೋಜನೆಯ ವಿವರವಾದ ಯೋಜನಾ ವರದಿಯನ್ನು ತಯಾರು ಮಾಡಲು ಕೆ.ಯು.ಐ.ಡಿ.ಎಫ್.ಸಿ ವತಿಯಿಂದ ಕನ್ಸಲ್ ಟೆಂಡರನ್ನು ನೇಮಿಸಿರುತ್ತಾರೆ. ಹಾಗೂ ವಿವರವಾದ ವರದಿಯನ್ನು ತಯಾರಿಸಬೇಕಾಗಿದೆ.

3) ಕಾರ್ಯಸಾಧ್ಯತಾ ವರದಿ ಅನುಸಾರ ರೂ.125.00 ಕೋಟಿ ಅಂದಾಜು ವೆಚ್ಚ ಆಗಿರುತ್ತದೆ.

4) ಅನ್ವಯಿಸುವುದಿಲ್ಲ.

5) ಇಲ್ಲ.

390 (143) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ):– ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ವ್ಯಾಪ್ತಿಯಲ್ಲಿ ಮಲಪ್ರಭಾ ಕುಡಿಯುವ ನೀರಿನ ಸರಬರಾಜು ಇಲ್ಲದ ಬಡಾವಣೆಗಳೆಷ್ಟು; (ಬಡಾವಣೆಗಳ ಹೆಸರು ಸಮೇತ ವಿವರ ನೀಡುವುದು);

ಆ) ಇವುಗಳಲ್ಲಿ ಅಧಿಕೃತ ಬಡಾವಣೆಗಳೆಷ್ಟು ಅನಧಿಕೃತ ಬಡಾವಣೆಗಳೆಷ್ಟು; (ವಿವರ ನೀಡುವುದು);

ಇ) ಈ ಎಲ್ಲ ಬಡಾವಣೆಗಳಿಗೆ ಮಲಪ್ರಭಾ ಕುಡಿಯುವ ನೀರಿನ ಸರಬರಾಜು ಮಾಡಲಾಗುವುದೇ;

ಈ) ಹಾಗಿಲ್ಲದಿದ್ದಲ್ಲಿ ಕಾರಣಗಳೇನು?